ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 296 ಗ್ರಾಪಂಅ 2015

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು,- ದಿನಾಂಕ:20.04.2016

**ಸುತ್ತೋಲೆ**

**ವಿಷಯ:** ಶೇ.1 ರಷ್ಟರ ಕಾರ್ಮಿಕ ಸುಂಕವನ್ನು ಕಾರ್ಮಿಕ ಕಲ್ಯಾಣ ಮಂಡಳಿಗೆ ಪಾವತಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಅಧೀನ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ ರವರ ಆದೇಶ ಸಂಖ್ಯೆ:ಎಲ್‌ಡಿ 300 ಎಲ್‌ಇಟಿ 2006, ದಿನಾಂಕ 18.01.2007

*****

ಕಟ್ಟಡ ಮತ್ತು ಇತರೆ ಕಾರ್ಮಿಕರ ಕಲ್ಯಾಣ ಸುಂಕ ಅಧಿನಿಯಮ 1996 ರ ನಿಯಮ 2(ಡಿ) ರನ್ವಯ ಸ್ಥಳೀಯ ಸಂಸ್ಥೆಗಳ ವತಿಯಿಂದ ನೇರವಾಗಿ ಅಥವಾ ಗುತ್ತಿಗೆದಾರರ ಮೂಲಕ ಕಾಮಗಾರಿಯನ್ನು ಅನುಷ್ಠಾನಗೊಳಿಸಿದಲ್ಲಿ ಆಯಾ ಸ್ಥಳೀಯ ಸಂಸ್ಥೆಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ವೈಯಕ್ತಿಕ ವಸತಿ ಮನೆಯನ್ನು ನಿರ್ಮಿಸುವ ಸಾರ್ವಜನಿಕರು ಹಾಗೂ ವಾಣಿಜ್ಯ ಉದ್ದೇಶಕ್ಕಾಗಿ ವಸತಿ ಸಮುಚ್ಚಯಗಳು, ಆಸ್ಪತ್ರೆಗಳು, ಮಾಲ್‌ಗಳನ್ನು ನಿರ್ಮಿಸುವ ಬಿಲ್ಡರ್ ಅಥವಾ ಗುತ್ತಿಗೆದಾರರು ಶೇ.1 ರಷ್ಟು ಕಾರ್ಮಿಕ ಸುಂಕವನ್ನು ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ಕಾರ್ಮಿಕರ ಕಲ್ಯಾಣ ಮಂಡಳಿಗೆ ಪಾವತಿಸಬೇಕಾಗಿರುತ್ತದೆ.

ಉಲ್ಲೇಖಿತ ಆದೇಶದಲ್ಲಿ ತಿಳಿಸಿದಂತೆ, ಸ್ಥಳೀಯ ಸಂಸ್ಥೆಗಳು ಆಂತರಿಕವಾಗಿ ಅನುಷ್ಠಾನಗೊಳಿಸುವ ಕಾಮಗಾರಿಗಳ ಒಟ್ಟು ವೆಚ್ಚದ ಶೇ.1 ರಷ್ಟು ಕಾರ್ಮಿಕ ಸುಂಕವನ್ನು 30 ದಿನಗಳೊಳಗಾಗಿ "ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ಕಾರ್ಮಿಕರ ಕಲ್ಯಾಣ ಮಂಡಳಿ" ಯ ಹೆಸರಿಗೆ ಚೆಕ್ ಮೂಲಕ ಪಾವತಿಸತಕ್ಕದ್ದು.

ಸ್ಥಳೀಯ ಸಂಸ್ಥೆಗಳ ಪರವಾನಗಿ ಪಡೆದು ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಗುತ್ತಿಗೆದಾರರಿಂದ ಶೇ.1 ರಷ್ಟು ಕಾರ್ಮಿಕ ಸುಂಕವನ್ನು ಪಡೆದು ನಂತರ ಸ್ಥಳೀಯ ಸಂಸ್ಥೆಗಳು ಸದರಿ ಕಾಮಗಾರಿ ಅನುಷ್ಠಾನಕ್ಕೆ ಪರವಾನಗಿ ನೀಡತಕ್ಕದ್ದು. ವಾಣಿಜ್ಯ ಉದ್ದೇಶಕ್ಕೆ ಕಟ್ಟಡ ನಿರ್ಮಿಸುವ ಕಟ್ಟಡ ಮಾಲೀಕ ಅಥವಾ ಗುತ್ತಿಗೆದಾರರಿಂದ ಶೇ.1 ರಷ್ಟು ಹಾಗೂ ರೂ.10 ಲಕ್ಷ ನಿರ್ಮಾಣ ವೆಚ್ಚ ಮೀರಿ ವಸತಿ ಉದ್ದೇಶಕ್ಕೆ ಕಟ್ಟಡ ನಿರ್ಮಿಸುವ ಕಟ್ಟಡ ಮಾಲೀಕರಿಂದ ಶೇ.1 ರಷ್ಟು ಕಾರ್ಮಿಕ ಸುಂಕವನ್ನು ಪಡೆದುಕೊಂಡ ನಂತರವೇ ಕಟ್ಟಡ ಪರವಾನಗಿಯನ್ನು ನೀಡತಕ್ಕದ್ದು. ಈ ರೀತಿ ವಸೂಲಿ ಮಾಡಿದ ಸುಂಕದ ಮೊತ್ತವನ್ನು ಡಿಮಾಂಡ್ ಡ್ರಾಫ್ಟ್ ಮೂಲಕ 30 ದಿನಗಳೊಳಗಾಗಿ ಆಯಾ ಸ್ಥಳೀಯ ಸಂಸ್ಥೆಗಳು "ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ಕಾರ್ಮಿಕರ ಕಲ್ಯಾಣ ಮಂಡಳಿ" ಗೆ ಸದರಿ ಕಾಮಗಾರಿ/ ಕಟ್ಟಡ ನಿರ್ಮಾಣದ ವಿವರಗಳೊಂದಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ಕಾರ್ಮಿಕರ ಕಲ್ಯಾಣ ಮಂಡಳಿ, 3 ನೇ ಹಂತ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು ಇವರಿಗೆ ಕಳುಹಿಸತಕ್ಕದ್ದು. ಈ ರೀತಿ ಕಾರ್ಮಿಕರ ಕಲ್ಯಾಣ ಮಂಡಳಿಗೆ ಪಾವತಿ ಮಾಡಿದ ಒಟ್ಟು ಸುಂಕದ ಮೊತ್ತದಲ್ಲಿ ಶೇ.1 ರಷ್ಟನ್ನು ಕಾರ್ಮಿಕ ಮಂಡಳಿಯು ಸದರಿ ಸುಂಕವನ್ನು ವಸೂಲಿ ಮಾಡಿದ ಸ್ಥಳೀಯ ಸಂಸ್ಥೆಗೆ ಆಡಳಿತ ವೆಚ್ಚಗಳಿಗಾಗಿ ಹಿಂದಿರುಗಿಸುತ್ತದೆ.

ಉಲ್ಲೇಖಿತ ಕಾರ್ಮಿಕ ಇಲಾಖೆಯ ಆದೇಶದಂತೆ ಕಾರ್ಮಿಕ ಸುಂಕವನ್ನು ಕಡ್ಡಾಯವಾಗಿ ಪಾವತಿಸಲು ಕ್ರಮವಹಿಸುವಂತೆ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಈ ಮೂಲಕ ಸೂಚಿಸಿದೆ.

(ಟಿ.ವಿ.ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
2. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು.
3. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು.
4. ಸಂಪಾದಕರು, ಕರ್ನಾಟಕ ವಿಕಾಸ ಮಾಸಪತ್ರಿಕೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. - ಕರ್ನಾಟಕ ವಿಕಾಸ ಮಾಸಪತ್ರಿಕೆಯಲ್ಲಿ ಪ್ರಕಟಿಸಲು.
5. ಗಣಕ ಕೋಶ - ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
6. ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿಯನ್ನು:

1. ಸನ್ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ಕಾರ್ಮಿಕರ ಕಲ್ಯಾಣ ಮಂಡಳಿ, 3 ನೇ ಹಂತ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ .
6. ಅಧ್ಯಕ್ಷರು, ಸುವರ್ಣ ಕರ್ನಾಟಕ ಕಟ್ಟಡ ನಿರ್ಮಾಣ ಮತ್ತು ಇತರೆ ಕಾರ್ಮಿಕರ ಸೇವಾ ಸಂಘ(ರಿ), ನಂ.74, 8 ನೇ ಅಡ್ಡ ರಸ್ತೆ, ಉಲ್ಲಾಳ್ ಮುಖ್ಯ ರಸ್ತೆ, ಜ್ಞಾನ ಗಂಗಾನಗರ, ಬೆಂಗಳೂರು-56